**All India Radio: Bangalore**
**Regional Bulletin In Kannada**
**28.12.2025 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**28.12.2025 / 2.30 p.m.**

**<><><><>**

ಮುಖ್ಯಾಂಶಗಳು :

೧. ರಾಷ್ಟ್ರಪತಿ ದ್ರೌಪದಿಮುರ್ಮು ಅವರಿಂದ ಕಾರವಾರದ ಕದಂಬ ನೌಕಾನೆಲೆಯ ಪರಿವೀಕ್ಷಣೆ : ದೇಶಿಯ ವಾಕ್‌ಶಿರ್ ಸಬ್‌ಮೆರಿನ್‌ನಲ್ಲಿ ಯಾನ

೨. ನಾಡು, ನುಡಿ ಸಂಸ್ಕೃತಿ ಬಗ್ಗೆ ಯುವಜನತೆಯ ಆಸಕ್ತಿ; ಮನದ ಮಾತಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಪ್ರಸ್ತಾಪ

೩. ಬೆಂಗಳೂರಿನಲ್ಲಿರುವ ಭಾರತೀಯ ವಿಜ್ಞಾನ ಸಂಸ್ಥೆಯ ಗೀತಾಂಜಲಿ ಸಾಂಸ್ಕೃತಿಕ ಕೇಂದ್ರದ ಚಟುವಟಿಕೆಗೆ ಮೆಚ್ಚುಗೆ; ದುಬಾಯ್‌ನಲ್ಲಿರುವ ಕನ್ನಡ ಕುಟುಂಬಗಳ ಭಾಷಾಭಿಮಾನಕ್ಕೆ ಪ್ರಧಾನಿ ಹೆಮ್ಮೆ

೪. ಮುಂಡಗೋಡ್ ನಲ್ಲಿ ಇಂದು ಬೌದ್ಧ ಪರಿಷತ್ತು ಆರಂಭ

೫. ರಾಜ್ಯ ಮಟ್ಟದ ವಿಜ್ಞಾನ ಸಮ್ಮೇಳನಕ್ಕೆ ಯಾದಗಿರಿ ಸಜ್ಜು; ಮೂರು ದಿನಗಳ ಅಧಿವೇಶನಕ್ಕೆ ಇಂದು ಚಾಲನೆ

******************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕಾರವಾರದ ಐ.ಎನ್.ಎಸ್ ಕದಂಬ ನೌಕಾನೆಲೆಯಲ್ಲಿ ಇಂದು ಪರಿವೀಕ್ಷಣೆ ನಡೆಸಿ ಐ.ಎನ್.ಎಸ್ ವಾಗ್ಶಿರ್ ಜಲಾಂತರಗಾಮಿಯಲ್ಲಿ ಸಮುದ್ರಯಾನ ಕೈಗೊಂಡರು ದ್ರೌಪದಿ ಮುರ್ಮು ಅವರು ಮಾಜಿ ರಾಷ್ಟ್ರಪತಿ ಡಾ.ಎಪಿಜೆ ಅಬ್ದುಲ್ ಕಲಾಂ ನಂತರ ಸಬ್ ಮೇರಿನ್ ನಲ್ಲಿ ಪ್ರಯಾಣಿಸಿದ ಎರಡನೇ ರಾಷ್ಟ್ರಪತಿಯಾಗಿದ್ದಾರೆ. ಐಎನ್‌ಎಸ್ ವಾಘಶೀರ್ ಭಾರತೀಯ ನೌಕಾಪಡೆಗೆ ಸೇರಿದ ಆರನೇಯ ಕಲ್ವರಿ-ವರ್ಗದ ಜಲಾಂತರ್ಗಾಮಿ ನೌಕೆಯಾಗಿದೆ. ಇದು ದೇಶದ ಅತ್ಯಂತ ಸುಧಾರಿತ ಜಲಾಂತರ್ಗಾಮಿಯಾಗಿದ್ದು, 'ಮೇಕ್ ಇನ್ ಇಂಡಿಯಾ'ದ ರಕ್ಷಣಾ ಉಪಕ್ರಮ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ನೌಕಾಪಡೆಯ ಸಿಬ್ಬಂದಿ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕುಮಾರ್ ತ್ರಿಪಾಠಿ, ಈ ಸಂದರ್ಭದಲ್ಲಿ ರಾಷ್ಟ್ರಪತಿಗಳೊಂದಿಗಿದ್ದರು. ಇದಕ್ಕೂ ಮೊದಲ

ಕಾರವಾರದ ಕದಂಬ ನೌಕಾನೆಲೆಗೆ ಆಗಮಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ರಾಜ್ಯಪಾಲ ಥಾವರ್ ಚಂದ್ ಗೆಹಲೋಟ್ , ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಸ್ವಾಗತಿಸಿದರು. ಈ ಸಂದರ್ಭದಲ್ಲಿ ನೌಕಾಪಡೆಯ ಹಿರಿಯ ಅಧಿಕಾರಿಗಳು ಹಾಗೂ ರಾಜ್ಯ ಸರ್ಕಾರದ ಅಧಿಕಾರಿಗಳು ಉಪಸ್ಥಿತರಿದ್ದರು.

******************

ಸಂಸ್ಕೃತಿಯ ಬೇರುಗಳನ್ನು ಹೊಸ ಚಿಂತನೆ ಮತ್ತ ಹೊಸ ವಿಧಾನಗಳೊಂದಿಗೆ ಮುಂದಿನ ಪೀಳಿಗೆ ಭದ್ರವಾಗಿ ಸಂರಕ್ಷಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಮನ್ ಕಿ ಬಾತ್ ನಲ್ಲಿ ಸಂತಸ ವ್ಯಕ್ತಪಡಿಸಿದ್ದಾರೆ. ಆಕಾಶವಾಣಿಯ ತಿಂಗಳ ಕಾರ್ಯಕ್ರಮ ಮನ್ ಕಿ ಬಾತ್‌ನಲ್ಲಿ ದೇಶ ವಿದೇಶ ಜನತೆಗಳನ್ನು ಉದ್ದೇಶಿಸಿದ ಭಾಷಣದಲ್ಲಿ ಪ್ರಧಾನಿ ಅವರು ಸಂಸ್ಕೃತಿ ಮತ್ತು ಭಾಷೆಗಳ ಬಗ್ಗೆ ಯುವಜನತೆ ತೋರುತ್ತಿರುವ ಆಸಕ್ತಿ ಬಗ್ಗೆ ಪ್ರಸ್ತಾಪಿಸಿದ್ದಾರೆ. ಬೆಂಗಳೂರಿನಲ್ಲಿರುವ ಭಾರತೀಯ ವಿಜ್ಞಾನ ಸಂಸ್ಥೆಯ ಕಲಾಸಕ್ತಿ ಹಾಗೂ ದುಬಾಯ್ ನಲ್ಲಿರುವ ಕನ್ನಡ ಕುಟುಂಬಗಳ ಕನ್ನಡ ಪಾಠಶಾಲೆಗಳ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ೧೨೫ನೇ ಮನದಾಳದ ಮಾತಿನಲ್ಲಿ ಉಲ್ಲೇಖಿಸಿದ್ದಾರೆ. ಸಂಶೋಧನೆ ಮತ್ತು ನಾವೀನ್ಯತೆ ಭಾರತೀಯ ವಿಜ್ಞಾನ ಸಂಸ್ಥೆಯ ವಿಶೇಷತೆಗಳ ಮೇಲೆ ಅಲ್ಲಿನ ಕೆಲವು ವಿದ್ಯಾರ್ಥಿಗಳು ಅಧ್ಯಯನ ಮತ್ತು ಸಂಶೋಧನೆ ನಡುವೆ ಸಂಗೀತಕ್ಕೂ ಸ್ಥಾನ ನೀಡಬೇಕು ಎಂದು ಅಭಿಪ್ರಾಯ ಪಟ್ಟರು. ಪುಟ್ಟ ಸಂಗೀತ ತರಬೇತಿ ಪ್ರಾರಂಭವಾಯಿತು ಬೆಳೆದು ನಿಂತ ಅದನ್ನು ಇಂದು ಗೀತಾಂಜಲಿ ಐಐಎಸ್‌ಸಿ ಎಂದು ಗುರುತಿಸಲಾಗುತ್ತದೆ. ಇದು ತರಗತಿ ಮಾತ್ರವಾಗಿರದೇ ಸಾಂಸ್ಕೃತಿಕ ಕೇಂದ್ರವಾಗಿದೆ. ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಜಾನಪದ ಸಂಪ್ರದಾಯಗಳನ್ನು ಮತ್ತು ಶಾಸ್ತ್ರೀಯ ಪ್ರಕಾರಗಳನ್ನು ವಿದ್ಯಾರ್ಥಿಗಳು ಕುಳಿತು ಅಭ್ಯಾಸ ಮಾಡುತ್ತಾರೆ. ಪ್ರಾಧ್ಯಾಪಕರು ಒಟ್ಟಿಗೆ ಕುಳಿತುಕೊಳ್ಳುತ್ತಾರೆ ಅವರ ಕುಟುಂಬಗಳು ಸಹಪಾಲ್ಗೊಳ್ಳುತ್ತವೆ. ೨೦೦ಕ್ಕೂ ಹೆಚ್ಚು ಜನರು ಇದರ ನಂಟು ಹೊಂದಿದ್ದಾರೆ.

******************

ವಿದೇಶಗಳಿಗೆ ತೆರಳಿದವರು ಕೂಡ ಆನಲೈನ್ ಮೂಲಕ ಈ ಕೊಂಡಿಯ ಸಂಪರ್ಕವನ್ನು ಹಿಡಿದಿಟ್ಟುಕೊಂಡಿದ್ದಾರೆಂದು ತಿಳಿಸಿದ್ದಾರೆ. ಮೂಲ ಬೇರುಗಳೊಂದಿಗೆ ಸಂಪರ್ಕ ಉಳಿಸಿಕೊಳ್ಳುವ ಪ್ರಯತ್ನವನ್ನು ದುಬಾಯ್‌ನಲ್ಲಿ ವಾಸಿಸುವ ಕನ್ನಡ ಕುಟುಂಬಗಳು ಮಾಡುತ್ತಿವೆ. ಕನ್ನಡ ಪಾಠಶಾಲೆ ಮೂಲಕ ಮಕ್ಕಳಿಗೆ ಕನ್ನಡ ಬರೆಯಲು ಮತ್ತು ಮಾತನಾಡಲು ಕಲಿಸಲಾಗುತ್ತಿದೆ. ಇಂದು ಸಾವಿರಕ್ಕೂ ಹೆಚ್ಚು ಮಕ್ಕಳು ಕನ್ನಡ

ಕಲಿಯುತ್ತಿದ್ದಾರೆ ನಿಜಕ್ಕೂ ಕನ್ನಡ ನಾಡು ನುಡಿ ನಮ್ಮ ಹೆಮ್ಮೆ. ಕನ್ನಡದ ಭೂಮಿ ಮತ್ತು ಭಾಷೆ ನಮ್ಮ ಹೆಮ್ಮೆಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (  ೩೮ ಸೆಕೆಂಡುಗಳು)

ಭಾರತೀಯ ವಿಜ್ಞಾನ ಸಂಸ್ಥೆಯ ಗೀತಾಂಜಲಿ ಐಎಎಸ್‌ಸಿಯ ಸಂಸ್ಥಾಪಕಿ ಗೀತಾ ಅನಂತ್ ಸಾಂಸ್ಕೃತಿಕ ಕೇಂದ್ರದ ಬಗ್ಗೆ ಮಾಹಿತಿ ನೀಡಿದ್ದಾರೆ.

ಧ್ವನಿ : ಗೀತಾ ಅನಂತ್ (  ೨೯ ಸೆಕೆಂಡುಗಳು)

******************

ಕೇಂದ್ರ ಸಂಸದೀಯ ಹಾಗೂ ಅಲ್ಪಸಂಖ್ಯಾತ ವ್ಯವಹಾರ ಖಾತೆ ಸಚಿವ ಕಿರಣ್ ರಿಜಿಜು ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ್ ಟಿಬೆಟಿಯನ್ ಕಾಲೋನಿಯಲ್ಲಿ ಇಂದು ಬೌದ್ಧ ಪರಿಷತ್ತು ಉದ್ಘಾಟಿಸಿದರು. ಬೌದ್ಧ ಪರಿಷತ್ತು ೪ ದಿನಗಳ ಕಾಲ ನಡೆಯಲಿದೆ. ದೇಶ ವಿದೇಶಗಳ ಸಾವಿರಕ್ಕೂ ಅಧಿಕ ಬೌದ್ಧ ಪ್ರತಿನಿಧಿಗಳು ಇದರಲ್ಲಿ ಪಾಲ್ಗೊಂಡಿದ್ದಾರೆ.
ಮುಂಡಗೋಡ್‌ನಲ್ಲಿ ವಾಸ್ತವ್ಯದಲ್ಲಿರುವ ಬೌದ್ಧ ಮಹಾಗುರು ದಲಾಯ್ ಲಾಮ ಅವರನ್ನು ಭೇಟಿ ಮಾಡಿ ಗೌರವ ಸಲ್ಲಿಸಿದರು. ಈ ಸಂದರ್ಭದಲ್ಲಿ ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

******************

ಯಾದಗಿರಿ ನಗರದ ಜಿಲ್ಲಾ ಕ್ರೀಡಾಂಗಣ, ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ೫ನೇ ರಾಜ್ಯ ಮಟ್ಟದ ವಿಜ್ಞಾನ ಸಮ್ಮೇಳನಕ್ಕೆ ಸಜ್ಜಾಗಿದ್ದು, ಇಂದಿನಿಂದ ಮೂರು ದಿನ ವೈಜ್ಞಾನಿಕ ಚಿಂತನೆಗೆ ವೇದಿಕೆಯಾಗಲಿದೆ. ಮೈಲಾಪುರ ಅಗಸಿಯಲ್ಲಿ ಇಂದು ಮಧ್ಯಾಹ್ನ ಸಮ್ಮೇಳನ ಅಧ್ಯಕ್ಷ ವಿಶ್ವಾರಾಧ್ಯ ಸತ್ಯಂಪೇಟೆ ಅವರ ಮೆರವಣಿಗೆಗೆ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ್ ಚಾಲನೆ ನೀಡುವರು. ಸಚಿವ ಶರಣಬಸಪ್ಪ ದರ್ಶನಾಪುರ ಅವರು ಸಮ್ಮೇಳನ ಉದ್ಘಾಟಿಸಲಿದ್ದು, ಸಚಿವ ಸತೀಶ ಜಾರಕಿಹೊಳಿ ಅವರು ಆರು ಪುಸ್ತಕಗಳ ಬಿಡುಗಡೆ ಮಾಡುವರು. ಪರಿಷತ್ತಿನ ಮಹಾಪೋಷಕ ಎ.ಎಸ್. ಕಿರಣ್‌ಕುಮಾರ್ ವಿಜ್ಞಾನ ಗಿರಿ ಸ್ಮರಣ ಸಂಚಿಕೆ ಬಿಡುಗಡೆ ಮಾಡುವರು. ಸಚಿವ ಎನ್.ಎಸ್. ಬೋಸರಾಜ್ ಅವರು ವಿಜ್ಞಾನ ವಸ್ತು ಪ್ರದರ್ಶನವನ್ನು ಉದ್ಘಾಟಿಸುವರು. ಶಾಂತವೀರ ಗುರುಮುರುಘಾರಾಜೇಂದ್ರ ಸ್ವಾಮೀಜಿ, ಸಿದ್ದಬಸವ ಕಬೀರಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಯಾದಗಿರಿ ಮತಕ್ಷೇತ್ರದ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಅವರು ಧ್ವಜ ಹಸ್ತಾಂತರಿಸುವರು. ಶಾಸಕರಾದ ಶರಣಗೌಡ

ಕಂದಕೂರ, ರಾಜಾ ವೇಣುಗೋಪಾಲ್ ನಾಯಕ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ನಾಳೆ ಬೆಳಿಗ್ಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಲವೀಶ್ ಒರಡಿಯಾ ಅವರು ರಾಷ್ಟ್ರ ಧ್ವಜಾರೋಹಣ ಹಾಗೂ ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷ ಹುಲಿಕಲ್ ನಟರಾಜ್ ಅವರು ಪರಿಷತ್ತು ಧ್ವಜಾರೋಹಣ ನೆರವೇರಿಸುವರು. ೩೦ರಂದು ಪರಿಷತ್ತಿನ ಮಹಾಧಿವೇಶನ, ವಿಶ್ವದಾಖಲೆ ಮಾಡಿದ ಸಂಪನ್ಮೂಲ ವ್ಯಕ್ತಿಗಳಿಗೆ ಅಭಿನಂದನೆ ಜರುಗಲಿದೆ. ವಿವಿಧ ಗೋಷ್ಠಿಗಳು, ಬಹಿರಂಗ ಅಧಿವೇಶನ ನಿರ್ಣಯಗಳು, ಡಾ.ಎಚ್.ಎನ್. ಪ್ರಶಸ್ತಿ, ಚೈತನ್ಯ ಪ್ರಶಸ್ತಿ ಪ್ರದಾನ ಹಾಗೂ ಸಮಾರೋಪ ಸಮಾರಂಭ ಜರುಗಲಿವೆ. ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಮಾನವ ಬಂಧುತ್ವ ವೇದಿಕೆ, ಇಸ್ರೋ, ಜವಾಹರಲಾಲ್ ನೆಹರೂ ತಾರಾಲಯ ಸೇರಿದಂತೆ ಇತರೆ ಸಂಸ್ಥೆಗಳು ಈ ಸಮ್ಮೇಳನಕ್ಕೆ ಸಹಕಾರ ನೀಡಿವೆ. ಜೊತೆಗೆ ತಮ್ಮ ವಿಜ್ಞಾನ ವಸ್ತು ಪ್ರದರ್ಶನಕ್ಕೂ ಸಿದ್ಧತೆ ಮಾಡಿಕೊಂಡಿವೆ.

******************

ಮಕ್ಕಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಬಹುದೊಡ್ಡ ಕಾರ್ಯನಿರ್ವಹಿಸುತ್ತಿದೆ. ಈ ನಿಟ್ಟಿನಲ್ಲಿ, ಶಿಕ್ಷಕರು ಉತ್ತಮ ಸಮಾಜ ಕಟ್ಟುವ ನಿರ್ಮಾತೃರಾಗಿದ್ದಾರೆ. ಅದರ ಜೋತೆ ಜೊತೆಗೆ ಮಕ್ಕಳ ಭವಿಷ್ಯವನ್ನು ರೂಪಿಸುವ ಶಿಲ್ಪಿಗಳಾಗಿದ್ದಾರೆ ಎಂದು ಧಾರವಾಡ ಹೈಕೋರ್ಟ್ ವಕೀಲರ ಸಂಘದ ಅಧ್ಯಕ್ಷ ಬಿ.ಡಿ.ಹಿರೇಮಠ ಹೇಳಿದ್ದಾರೆ. ಧಾರವಾಡದಲ್ಲಿ ಆಯೋಜಿಸಲಾಗಿದ್ದ ಉಮಂಗತರಂಗ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸಿ.ಬಿ.ಎಸ್.ಇ ಶಿಕ್ಷಣ ಪದ್ಧತಿ ವಿದ್ಯಾರ್ಥಿಗಳ ಸಮಗ್ರ ಅಭಿವೃದ್ಧಿಗೆ ಒತ್ತು ನೀಡುತ್ತದೆ. ಪಠ್ಯಜ್ಞಾನ ಮಾತ್ರವಲ್ಲದೆ, ಜೀವನ ಕೌಶಲ್ಯಗಳು, ವಿಜ್ಞಾನ ಮನೋಭಾವ, ನೈತಿಕ ಮೌಲ್ಯಗಳು, ಶಿಸ್ತಿನ ಬದುಕು ಮತ್ತು ನಾಯಕತ್ವ ಗುಣಗಳನ್ನು ಬೆಳೆಸುವಲ್ಲಿ ಈ ಪದ್ಧತಿ ಪ್ರಮುಖ ಪಾತ್ರ ವಹಿಸಿದೆ ಎಂದರು.

******************

ದಾವಣಗೆರೆ ಜಿಲ್ಲೆ ಹರಿಹರ ತಾಲೂಕಿನ ಕೊಂಡಜ್ಜಿಯ ಪೊಲೀಸ್ ಪಬ್ಲಿಕ್ ಶಾಲೆಯಲ್ಲಿಂದು ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯಿಂದ ಅಗ್ನಿ ಅವಘಡಗಳಿಂದ ರಕ್ಷಣೆ ಕುರಿತು ಅಣಕು ಪ್ರದರ್ಶನ ಏರ್ಪಡಿಸಲಾಗಿತ್ತು. ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯ ಜಿಲ್ಲಾ ಅಧಿಕಾರಿ ಮಹಾಲಿಂಗಪ್ಪ, ಅಗ್ನಿ ಅವಘಡಗಳು ಸಂಭವಿಸಿದಾಗ ತಮ್ಮನ್ನು ರಕ್ಷಿಸಿಕೊಳ್ಳುವುದರ ಜೊತೆಗೆ ಅಪಾಯದಲ್ಲಿ ಸಿಲುಕಿದವರನ್ನು ಹೇಗೆ ರಕ್ಷಿಸಬೇಕು ಎನ್ನುವುದರ ಬಗ್ಗೆ ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಟ್ಟರು. ಪ್ರತ್ಯಕ್ಷ ಕಾರ್ಯಕ್ರಮದ ಭಾಗವಾಗಿ ಅಗ್ನಿ ನಂದಿಸುವ ಉಪಕರಣಗಳ

ಬಳಿಕೆ, ಅಗ್ನಿಶಾಮಕ ವಾಹನಗಳ ಕಾರ್ಯವಿಧಾನ, ಬೆಂಕಿ ಆವರಿಸಿದ ಸಂದರ್ಭದಲ್ಲಿ ಜನರನ್ನು ರಕ್ಷಿಸುವ ಕ್ರಮಗಳು ಹಾಗೂ ಪ್ರಥಮ ಚಿಕಿತ್ಸೆ ನೀಡುವ ವಿಧಾನಗಳನ್ನು ಪ್ರದರ್ಶಿಸಲಾಯಿತು.

*****************

ಹಲವು ವರ್ಷಗಳಿಂದ ಕೋಲಾರ ನಗರದ ರಸ್ತೆಬದಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸಂಗ್ರಹವಾಗಿದ್ದ ಕಟ್ಟಡ ಮತ್ತು ಪಾರಂಪರಿಕ ತ್ಯಾಜ್ಯವನ್ನು ತೆರವುಗೊಳಿಸುವ ಕಾರ್ಯ ನಿರಂತರ ನಡೆಯುತ್ತಿದ್ದು ಈವರೆಗೆ ಸುಮಾರು ೨ ಸಾವಿರದ ೫೦೦ ಟನ್ ತ್ಯಾಜ್ಯ ತೆರವುಗೊಳಿಸಲಾಗಿದೆ ಎಂದು ನಗರಸಭೆ ಆಯುಕ್ತ ನವೀನ್‌ಚಂದ್ರ ತಿಳಿಸಿದ್ದಾರೆ. ನಗರ ಹೊರವಲಯದ ಬಂಗಾರಪೇಟೆ ಬೈಪಾಸ್‌ನಿಂದ ಬೇತಮಂಗಲ ಮೇಲ್ಸೇತುವೆ ವರೆಗಿನ ಮುಖ್ಯ ರಸ್ತೆಯ ಎರಡೂ ಬದಿ, ಮಣಿಘಟ್ಟ, ಸ್ಯಾನಿಟೋರಿಯಂ ಪ್ರದೇಶ, ನಗರ ಬಸ್ ನಿಲ್ದಾಣ ಹಿಂಭಾಗದ ಸರ್ವೆ ನಂಬರ್ ೧೮೧ರ ವ್ಯಾಪ್ತಿಯಲ್ಲಿದ್ದ ಕಟ್ಟಡ ತ್ಯಾಜ್ಯ ಮತ್ತು ಪಾರಂಪರಿಕ ತ್ಯಾಜ್ಯವನ್ನು ಸಂಪೂರ್ಣವಾಗಿ ತೆರವುಗೊಳಿಸಲಾಗಿದೆ ಎಂದರು. ಕಾರ್ಯಾಚರಣೆಯಲ್ಲಿ ೧೬ ಟಿಪ್ಪರ್ ಹಾಗೂ ೧೦ ಜೆಸಿಬಿ ಯಂತ್ರಗಳನ್ನು ಬಳಸಲಾಗಿತ್ತು. ತೆರವುಗೊಳಿಸಲಾದ ಕಟ್ಟಡ ತ್ಯಾಜ್ಯವನ್ನು ಅರಾಬಿಕೊತ್ತನೂರು ಸಮೀಪದ ಕೆಂದಟ್ಟಿಯ ಕ್ರಷರ್ ಹಳ್ಳಕ್ಕೆ ಸಾಗಿಸಲಾಯಿತು.

*****************